# Akashvani : Bangalore
# Regional Bulletin In Kannada
# 08.07.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**08.07.2025 / 18.40  hrs**

**<><*<><>*><>**

ಮುಖ್ಯಾಂಶಗಳು

- ಎತ್ತಿನಹೊಳೆ ಯೋಜನೆ ಕುರಿತ ಆಕ್ಷೇಪ ಬಗೆಹರಿಸುವುದಾಗಿ ಕೇಂದ್ರ ಜಲಶಕ್ತಿ ಸಚಿವರ ಭರವಸೆ
- ತುಮಕೂರು ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ಹಿರಿಯ ಸಾಹಿತಿ ಹಂಪನಾ ಸೇರಿದಂತೆ ಹಲವರಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಂದ ಗೌರವ ಡಾಕ್ಟರೇಟ್ ಪ್ರದಾನ
- ಅನ್ನಭಾಗ್ಯ ಪಡಿತರ ಸಾಗಾಟ ; ಲಾರಿ ಮಾಲೀಕರಿಗೆ ಬಾಕಿ ಹಣ ಬಿಡುಗಡೆ ಮಾಡಿದ ಸರ್ಕಾರ
- ಕಂದಾಯ ಇಲಾಖೆಯ ಸಮಗ್ರ ದಾಖಲಾತಿ ಡಿಜಿಟಲೀಕರಣದಿಂದ ಜನಸಾಮಾನ್ಯರಿಗೆ ಅನುಕೂಲ - ಸಚಿವ ಶರಣಬಸಪ್ಪ ದರ್ಶನಾಪುರ

**<><*<><>*><>**

ಎತ್ತಿನಹೊಳೆ ಯೋಜನೆ ವಿಚಾರವಾಗಿ ಎದುರಾಗಿರುವ ತಾಂತ್ರಿಕ ಆಕ್ಷೇಪಣೆ ಬಗ್ಗೆ ಕೇಂದ್ರ ಪರಿಸರ ಸಚಿವರಿಗೆ ಸ್ಪಷ್ಟನೆ ನೀಡಲಾಗಿದೆ. ಸಚಿವರು ಆಕ್ಷೇಪಣೆಗಳನ್ನು ಬಗೆಹರಿಸುವ ಭರವಸೆ ನೀಡಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಇಬ್ಬರು ಕೇಂದ್ರ ಸಚಿವರನ್ನು ಭೇಟಿ ಮಾಡಲಾಗಿದ್ದು, ಎತ್ತಿನಹೊಳೆ ವಿಚಾರವಾಗಿ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಭೇಟಿ ಮಾಡಿ, ಕಳಸಾಬಂಡೂರಿ ಯೋಜನೆ ವಿಚಾರವಾಗಿ ಚರ್ಚಿಸಲಾಗಿದೆ ಎಂದು ಹೇಳಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನ ನೀಡುವಂತೆ ಜಲಶಕ್ತಿ ಸಚಿವರಿಗೆ ಮನವಿ ಮಾಡಲಾಗಿದ ಎಂದು ತಿಳಿಸಿದ್ದಾರೆ. ಈ ಯೋಜನೆಯು ಮಧ್ಯಕರ್ನಾಟಕ ಭಾಗದ ಅತಿದೊಡ್ಡ ಏತ ನೀರಾವರಿಯಾಗಿದೆ. ೨೯.೯೦ ಟಿಎಂಸಿ ನೀರನ್ನು ಸಣ್ಣ ನೀರಾವರಿ ಯೋಜನೆ ಮೂಲಕ ಚಿಕ್ಕಮಗಳೂರು, ಚಿತ್ರದುರ್ಗ, ತುಮಕೂರು ಹಾಗೂ ದಾವಣಗೆರೆಯ ಕೃಷಿ ಭೂಮಿಗೆ ನೀರಾವರಿ ಒದಗಿಸಲಾಗುವುದು. ಶೀಘ್ರವೇ ಅನುದಾನ ಬಿಡುಗಡೆಗೊಳಿಸುವಂತೆ ಜಲಸಂಪನ್ಮೂಲ ಸಚಿವರಿಗೆ ಮನವಿ ಮಾಡಿದ್ದಾರೆ.

**<><*<><>*><>**

ಐದು ರಾಷ್ಟ್ರಗಳ ಪ್ರವಾಸದ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರು, ಬ್ರೆಜಿಲ್ ರಾಜಧಾನಿ ಬ್ರೆಸಿಲಿಯಾಗೆ ತಲುಪಿದ್ದಾರೆ. ತಮ್ಮ ಪ್ರವಾಸದ ಭಾಗವಾಗಿ ಪ್ರಧಾನಿ, ಬ್ರೆಜಿಲ್ ಅಧ್ಯಕ್ಷ ಲುಲಾ ಡಾ ಸಿಲ್ವಾ ಅವರೊಂದಿಗೆ ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸುವ ಹಾಗೂ ಪರಸ್ಪರ ಹಿತಾಸಕ್ತಿಯ ಪ್ರಮುಖ ವಿಷಯಗಳ ಕುರಿತು ಮಾತುಕತೆ ನಡೆಸಲಿದ್ದಾರೆ. ಪ್ರಧಾನಿಯವರ ಬ್ರೆಜಿಲ್ ಪ್ರವಾಸದ ಕುರಿತು ಬ್ರೆಸಿಲಿಯಾದಲ್ಲಿರುವ ನಮ್ಮ ಬಾತ್ಮೀದಾರರಿಂದ ಹೆಚ್ಚಿನ ಮಾಹಿತಿ :

ಧ್ವನಿ. ಎಚ್.ಆರ್.ಸುಧೀಂದ್ರ ( ೪೮ ಸೆಕೆಂಡ್ಸ್)

<><*<><>*><>

ಶಿಕ್ಷಣವು ವ್ಯಕ್ತಿತ್ವ ವಿಕಸನದ ಜೊತೆಗೆ ಸಮಾಜ ಮತ್ತು ರಾಷ್ಟ್ರದ ಪ್ರಗತಿಗೆ ಆಧಾರವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ತುಮಕೂರು ವಿಶ್ವವಿದ್ಯಾಲಯದ ೧೮ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದಿನ ಜಗತ್ತಿನಲ್ಲಿ ಹೊಸ ಆವಿಷ್ಕಾರಗಳು, ಹೊಸ ತಂತ್ರಜ್ಞಾನಗಳು ಪ್ರತೀ ದಿನ ಹೊರಹೊಮ್ಮುತ್ತಿವೆ. ಇದರಿಂದ ಯುವಪೀಳಿಗೆಯು ಜೀವನಪರ್ಯಂತ ವಿದ್ಯಾರ್ಥಿಯಾಗಿ ಕೆಲಸ ಮಾಡುವ ಅನಿವಾರ್ಯತೆಯಿದೆ ಎಂದರು. ವಿದ್ಯಾರ್ಥಿಗಳ ಪ್ರತಿಯೊಂದು ನಿರ್ಧಾರ ಹಾಗೂ ಪ್ರಯತ್ನಗಳು ಸುಸ್ಥಿರ ಅಭಿವೃದ್ಧಿಯ ಕಲ್ಪನೆಯನ್ನು ಹೊಂದಿರಬೇಕು. ನೀವು ಯಾವುದೇ ಕ್ಷೇತ್ರಕ್ಕೆ ಹೋದರೂ, ಹಸಿರು ಭಾರತ, ಸ್ವಚ್ಛ ಭಾರತ ಮತ್ತು ಬಲಿಷ್ಠ ಭಾರತವನ್ನು ನಿರ್ಮಿಸಬೇಕು ಎಂದು ಕರೆ ನೀಡಿದರು. ಘಟಿಕೋತ್ಸವದಲ್ಲಿ ಶಿಕ್ಷಣ, ಸಾಹಿತ್ಯ, ಆರೋಗ್ಯ ಮತ್ತು ಸಮಾಜಕಾರ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಎಸ್.ನಾಗಣ್ಣ, ಹಂಪ ನಾಗರಾಜಯ್ಯ ಹಾಗೂ ದಿಲೀಪ್ ಸುರಾನಾ ಅವರಿಗೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಲಾಯಿತು. ವಿವಿಧ ವಿಷಯದಲ್ಲಿ ಅತಿ ಹೆಚ್ಚು ಅಂಕಗಳಿಸಿ ಪದವಿ ಪಡೆದಿರುವ ೭೬ ವಿದ್ಯಾರ್ಥಿಗಳಿಗೆ ೧೦೬ ಚಿನ್ನದ ಪದಕ ಹಾಗೂ ೪ ವಿದ್ಯಾರ್ಥಿಗಳಿಗೆ ೬ ನಗದು ಬಹುಮಾನ ಪ್ರದಾನ ಮಾಡಲಾಯಿತು.

<><*<><>*><>

ರಾಜ್ಯಾದ್ಯಂತ ನ್ಯಾಯ ಬೆಲೆ ಅಂಗಡಿಗೆ ಪಡಿತರ ಆಹಾರ ಧಾನ್ಯ ಸಾಗಣೆ ಸಂಬಂಧಿಸಿ ಪಾವತಿ ಮಾಡಬೇಕಾಗಿದ್ದ ಹಣವನ್ನು ಬಿಡುಗಡೆ ಮಾಡಿ ಸರ್ಕಾರ ಆದೇಶ ಹೊರಡಿಸಿದೆ. ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಡಿತರ ಸಾಗಣೆ ಸ್ಥಗಿತಗೊಳಿಸಿ ಇಂದು ಲಾರಿ ಮಾಲೀಕರು ಮುಷ್ಕರ ನಡೆಸುತ್ತಿದ್ದರು.

<><*<><>*><>

ಕಂದಾಯ ಇಲಾಖೆ ಹಿಂದಿನ ಸಮಗ್ರ ದಾಖಲಾತಿಗಳನ್ನು ಡಿಜಿಟಲೀಕರಣ ಮಾಡುವುದರಿಂದ ಜನ ಸಾಮಾನ್ಯರಿಗೆ ಅತ್ಯಂತ ಅನೂಕೂಲವಾಗಲಿದೆ ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪುರ ನಗರದ ತಹಶೀಲ್ದಾರ್ ಕಚೇರಿಯಲ್ಲಿ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿ ಮಾತನಾಡಿದ ಅವರು, ಕಂದಾಯ ದಾಖಲಾತಿಗಳ ಡಿಜಿಟಲೀಕರಣ ಶೀಘ್ರದಲ್ಲೇ ಪೂರ್ಣಗೊಳ್ಳಲಿದೆ. ಜಿಲ್ಲೆಯಲ್ಲಿ ಒಟ್ಟು ೯೧ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ಹಂಚಿಕೆ ಮಾಡಲಾಗಿದೆ. ಅದರಲ್ಲಿ ತಾಲ್ಲೂಕಿನ ಒಟ್ಟು ೩೯ ಅಧಿಕಾರಿಗಳಿಗೆ ಸದ್ಯ ವಿತರಿಸಲಾಗುವುದು. ೫೬ ಸಾವಿರ ದಾಖಲಾತಿಗಳಲ್ಲಿ ಶೇಕಡ ೨೫ರಷ್ಟು ಮಾತ್ರ ಡಿಜಿಟಲೀಕರಣಕ್ಕೆ ಬಾಕಿ ಉಳಿದಿವೆ ಎಂದು ಅವರು ತಿಳಿಸಿದರು.

<><*<><>*><>

ಬೆಳಗಾವಿಯಲ್ಲಿ ಇಂದು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ಕೃಷಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾದ ದಿನ ಬಳಕೆಯ ವಸ್ತುಗಳ ಉತ್ಪಾದನೆ ಹಾಗೂ ಮಾರಾಟದ ಮೂಲಕ ಉದ್ಯಮ ನಿರ್ವಹಣೆಗೆ ಉತ್ತೇಜನ ನೀಡುವ ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆಯ ಅರಿವು ಮೂಡಿಸುವ ಕಾರ್ಯಕ್ರಮವನ್ನು ಲೋಕೋಪಯೋಗಿ

ಸಚಿವ ಸತೀಶ್ ಜಾರಿಕಿಹೊಳಿ ಉದ್ಘಾಟಿಸಿದರು. ಎಫ್.ಎಂ.ಇ. ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದಲ್ಲಿ ಸಬ್ಸಿಡಿ ೧೫ ಲಕ್ಷ ರೂಪಾಯಿವರೆಗೆ ಹಣಕಾಸಿನ ಸಹಾಯ ನೀಡಲಾಗುತ್ತದೆ. ಇದರಲ್ಲಿ ಕೇಂದ್ರ ಸರ್ಕಾರ ೬ ಲಕ್ಷ ನೀಡಿದರೆ ರಾಜ್ಯ ಸರ್ಕಾರ ೯ ಲಕ್ಷ ರೂಪಾಯಿಗಳ ಸಹಾಯಧನ ಒದಗಿಸುತ್ತದೆ ಎಂದು ಸಚಿವರು ತಿಳಿಸಿದರು.

<><*<><>*><>

ರಾಷ್ಟ್ರೀಯ ಹೆದ್ದಾರಿ ಬದಿ ಅತಿಕ್ರಮಣವಾಗಿರುವ ಹೆದ್ದಾರಿ ಇಲಾಖೆಗೆ ಸಂಬಂಧಿಸಿದ ಜಾಗ ಹಾಗೂ ಹೆದ್ದಾರಿ ಬದಿ ಇರುವ ಅನಧಿಕೃತ ಅಂಗಡಿಗಳನ್ನು ತೆರವು ಮಾಡಬೇಕು. ಈ ಬಗ್ಗೆ ರಾಷ್ಟ್ರೀಯ ಹೆದ್ದಾರಿ, ಕಂದಾಯ ಹಾಗೂ ಮಂಗಳೂರು ಮಹಾನಗರ ಪಾಲಿಕೆ ಜಂಟಿಯಾಗಿ ಸರ್ವೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ಸೂಚಿಸಿದ್ದಾರೆ. ಮಂಗಳೂರಿನ ಜಿಲ್ಲಾಪಂಚಾಯತ್ ಸಭಾಂಗಣದಲ್ಲಿಂದು ನಡೆದ ದಕ್ಷಿಣ ಕನ್ನಡ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಗರದ ಕೂಳೂರು, ಸುರತ್ಕಲ್, ಪಣಂಬೂರು, ಅಡ್ಯಾರ್ ಮೊದಲಾದ ಪ್ರದೇಶಗಳಲ್ಲಿ ಹೆದ್ದಾರಿ ಬದಿಗಳಲ್ಲಿ ಅನಧಿಕೃತ ಕಟ್ಟಡ ನಿರ್ಮಾಣ, ಅಂಗಡಿಗಳು, ತ್ಯಾಜ್ಯ ಎಸೆಯುವುದು ನಡೆಯುತ್ತಿದೆ. ಈ ಬಗ್ಗೆ ಪ್ರತಿಕ್ರಿಯಿಸಿದ ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ. ಅರುಣ್ ಕೆ. ಈ ಬಗ್ಗೆ ಸರ್ವೆ ಮಾಡಿ ಅನಧಿಕೃತ ಅಂಗಡಿಗಳನ್ನು ಗುರುತಿಸಿದರೆ ವಾರದೊಳಗೆ ತೆರವಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಎನ್‌ಎಚ್ ಅಧಿಕಾರಿಗಳು ಭರವಸೆ ನೀಡಿದ್ದಾರೆ.

<><*<><>*><>

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪ್ರಾದೇಶಿಕ ಕಚೇರಿಯನ್ನು ಸಂಶೋಧನೆ ಮತ್ತು ನಾವೀನ್ಯತೆ ಪ್ರತಿಷ್ಠಾನ ಹಾಗೂ ಪರೀಕ್ಷಾ ಪರಿಣಿತಿ ಕೇಂದ್ರವಾಗಿ ಪರಿವರ್ತಿಸಲಾಗಿದೆ. ಈ ಪ್ರಾದೇಶಿಕ ಕೇಂದ್ರವನ್ನು ಇದೇ ೧೦ ರಂದು ಬೆಂಗಳೂರಿನ ನಾಗರಭಾವಿಯಲ್ಲಿ ಉದ್ಘಾಟಿಸಲಾಗುತ್ತಿದ್ದು, ಕೇಂದ್ರ ಸಂವಹನ ಹಾಗೂ ಈಶಾನ್ಯ ಪ್ರದೇಶದ ಅಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಜಲಾಶಯದ ಪ್ರದೇಶದಲ್ಲಿ ನಿರಂತರ ಮಳೆಯಗುತಿರುವುದರಿಂದ ಒಳಹರಿವಿನ ಪ್ರಮಾಣ ೨೦ ರಿಂದ ೨೫ ಸಾವಿರ ಕ್ಯೂಸೆಕ್ ಇದ್ದು, ಹೆಚ್ಚುವರಿ ನೀರನ್ನು ಸ್ಪಿಲ್ ವೇ ಗೇಟ್ ಮುಖಾಂತರ ನದಿಗೆ ಬಿಡಲಾಗುವುದು ಎಂದು ಭದ್ರಾ ಯೋಜನಾ ವೃತ್ತದ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಭದ್ರಾ ನದಿಯ ಎಡ ಮತ್ತು ಬಲ ದಂಡೆಯ ಉದ್ದಕ್ಕೂ ತಗ್ಗು ಪ್ರದೇಶದಲ್ಲಿ ವಾಸಿಸುವ ಜನರು ಮುಂಜಾಗ್ರತೆಯಾಗಿ ಸುರಕ್ಷಿತ ಸ್ಥಳಗಳನ್ನು ಸೇರಿಕೊಳ್ಳಬೇಕು. ನದಿ ಪಾತ್ರದಲ್ಲಿ ಸಾರ್ವಜನಿಕರು ತಿರುಗಾಡುವುದು. ಜಾನುವಾರುಗಳನ್ನು ನದಿ ಪಾತ್ರದಲ್ಲಿ ಮೇಯಿಸುವುದನ್ನು ನಿಷೇಧಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

<><*<><>*><>

ರೈತರು ಬೆಳೆ ವಿಮೆ ಮಾಡಿಸುವುದರಿಂದ ಅತಿವೃಷ್ಟಿ, ಅನಾವೃಷ್ಟಿ ಹಾಗೂ ಇನ್ನೂ ಮುಂತಾದ ಪ್ರಕೃತಿ ವಿಕೋಪಗಳಿಂದ ಬೆಳೆಗಳಿಗೆ ಹಾನಿಯಾದರೆ ಅಂತಹ ಸಂದರ್ಭದಲ್ಲಿ ಬೆಳೆ ನಷ್ಟ ಪರಿಹಾರ ಸಿಗಲಿದೆ.

ಹಾಗಾಗಿ ಅಧಿಕಾರಿಗಳು ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಬಗ್ಗೆ ಎಲ್ಲಾ ರೈತರಿಗೆ ಜಾಗೃತಿ ಮೂಡಿಸಿ ಬೆಳೆ ವಿಮೆಗೆ ನೋಂದಾಯಿಸಲು ಪ್ರೇರೇಪಿಸಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಸೂಚಿಸಿದ್ದಾರೆ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು**

೧. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರ್ಪೋರೇಟ್ ಬಂಡವಾಳಗಾರರ ಹಿತದೃಷ್ಟಿಯಿಂದ ಕಾರ್ಮಿಕರ ರಕ್ಷಣೆಗಾಗಿ ಇದ್ದ ಕಾನೂನುಗಳನ್ನು ರದ್ದುಗೊಳಿಸಿ ೪ ಸಂಹಿತೆಗಳನ್ನಾಗಿ ಅನುಷ್ಠಾನಕ್ಕೆ ತಂದು ಕಾರ್ಮಿಕರ ಹಕ್ಕುಗಳನ್ನು ಕಸಿದುಕೊಂಡು ಶೋಷಣೆ ಮಾಡಲು ಮುಂದಾಗುತ್ತಿವೆ. ಇದರ ವಿರುದ್ಧ ನಾಳೆ ನಡೆಯಲಿರುವ ಸಾರ್ವತ್ರಿಕ ಮುಷ್ಕರಕ್ಕೆ ಸಿಪಿಐಎಂ ಪಕ್ಷ ಬೆಂಬಲಿಸಲಿದೆ ಎಂದು ಪಕ್ಷದ ಕೋಲಾರ ಜಿಲ್ಲಾ ಕಾರ್ಯದರ್ಶಿ ಪಿ.ಆರ್ ಸೂರ್ಯನಾರಾಯಣ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**